ಕೊಳಚೆ ಪ್ರದೇಶದಲ್ಲಿ ವಾಸಿಸುವ ಜನರಿಗೆ ಪಟ್ಟಾ ನೀಡುವುದು

1409(2057), ಶ್ರೀ ಅನಿಲ್ ಲಾಡ್ (ಬಳ್ಳಾರಿ ನಗರ)

ಅ) ಬಳ್ಳಾರಿ ನಗರದ ಕೊಳಚೆ ಪ್ರದೇಶದಲ್ಲಿ ಹಲವಾರು ವರ್ಷಗಳಿಂದ ವಾಸಿಸುತ್ತಿರುವ ಜನರಿಗೆ ಪಟ್ಟಾ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಎಷ್ಟು ನಿವಾಸಿಗಳಿಗೆ ಪಟ್ಟಾ ನೀಡಲಾಗಿದೆ; ಉಳಿದ ನಿವಾಸಿಗಳಿಗೆ ಯಾವಾಗ ನೀಡಲಾಗುವುದು;

ಇ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಜರೂರು ಕ್ರಮವೇನು?

ಡಾ॥ಎಂ.ಹೆಚ್.ಅಂಬರೀಷ್(ವಸತಿ ಸಚಿವರು)

ಅ) ಕೊಳಚೆ ಪ್ರದೇಶದಲ್ಲಿ ವಾಸಿಸುವ ಜನರಿಗೆ ಮಂಡಳಿವತಿಯಿಂದ ಪಟ್ಟಾ ನೀಡಲು ಮಂಡಳಿಯ ಕಾಯಿದೆಯಡಿ ಅವಕಾಶವಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಆರ್.ಎಂ.ಎಸ್.ಎ. ಯೋಜನೆಯಡಿ ಶಾಲಾ ಕಟ್ಟಡ ಕಾಮಗಾರಿ

1410(2357), ಶ್ರೀ ಅಪ್ಪಚ್ಚು ರಂಜನ್ ಎಂ.ಪಿ.(ಮಡಿಕೇರಿ)

ಅ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಮಂಜೂರಾಗಿರುವ ಶಾಲಾ ಕಟ್ಟಡ ಕಾಮಗಾರಿಗೆ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅನುದಾನ ಬಿಡುಗಡೆಗೆ ವಿಳಂಬವಾಗಲು ಕಾರಣವೇನು;

ಇ) ಅನುದಾವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು; (ಪೂರ್ಣ ಮಾಹಿತಿ ನೀಡುವುದು)

ಈ) ರಾಜ್ಯದಲ್ಲಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ವಿಭಾಗವಾರು ಮಾಹಿತಿ ನೀಡುವುದು)

ಉ) ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿನಿಯರ ಸಂಖ್ಯೆಗೆ ಅನುಗುಣವಾಗಿ ಶೌಚಾಲಯಗಳಿವೆಯೇ: ಇಲ್ಲದಿದ್ದರೆ ಕಾರಣವೇನು;

ಊ) ಅವಶ್ಯಕತೆ ಇರುವ ಕಡೆಗಳಲ್ಲಿ ಶೌಚಾಲಯ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಜಿಲ್ಲಾವಾರು ವಿವರ ನೀಡುವುದು)

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಗುತ್ತಿಗೆದಾರರು ಸಲ್ಲಿಸಿದ ಬಿಲ್‌ಗಳನ್ನು ರಾಜ್ಯ ಕಚೇರಿಯಲ್ಲಿ ಪರಿಶೀಲಿಸಿ ಕಾಲಕಾಲಕ್ಕೆ ಪಾವತಿಯಾಗುತ್ತಿರುತ್ತದೆ. ಇನ್ನುಳಿದ ಬಿಲ್ಲುಗಳು ಗುತ್ತಿಗೆದಾರರು ಇಲಾಖೆಗೆ ಸಲ್ಲಿಸದೇ ಇರುವುದರಿಂದ ಹಣ ಬಿಡುಗಡೆ ಮಾಡಿರುವುದಿಲ್ಲ.

ಪ್ರಯುಕ್ತ ವಿಳಂಬದ ಪ್ರಶ್ನೆ ಉದ್ಭವಿಸಿರುವುದಿಲ್ಲ.

ಇ) ಗುತ್ತಿಗೆದಾರರು ಕಟ್ಟಡ ಕಾಮಗಾರಿಗಳ ಪ್ರಗತಿಗೆ ಅನುಗುಣವಾಗಿ ಬಿಲ್‌ಗಳನ್ನು ಸಲ್ಲಿಸಿದ್ದು, ಈ ಬಿಲ್‌ಗಳನ್ನು ಪಿ.ಎಂ.ಸಿ.ಯವರು ಪರಿಶೀಲಿಸಿ ದೃಢೀಕರಿಸಿದ ನಂತರ ಈ ಕಛೇರಿಯಲ್ಲಿ ಬಿಲ್‌ಗಳನ್ನು ಪುನರ್ ಪರಿಶೀಲಿಸಿ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.

ಈ) ಅನುಬಂಧದಲ್ಲಿ ಲಗತ್ತಿಸಿದೆ.

ಉ) ಇಲ್ಲ.

ಸರ್ಕಾರಿ ಪ್ರೌಢ ಶಾಲಾ ಆವರಣದಲ್ಲಿಯೇ ಹಲವಾರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ನಡೆಯುತ್ತಿರುವುದರಿಂದ ಅಲ್ಲಿ

ಲಭ್ಯವಿರುವ ಶೌಚಾಲಯಗಳನ್ನೇ ಉಪಯೋಗಿಸಲಾಗುತ್ತಿದೆ ಹಾಗೂ ಅನುದಾನದ ಕೊರತೆ ಇದಕ್ಕೆ ಕಾರಣ.

ಊ) ಒಟ್ಟಾರೆ ಬೇಡಿಕೆಯನ್ನು ಗಮನಿಸಿ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸಲು ₹ 147.00 ಕೋಟಿಗಳ ಅನುದಾನವನ್ನು ಹೆಚ್ಚುವರಿಯಾಗಿ ಬಿಡುಗಡೆ ಮಾಡಲು ಸವಿವರ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದ್ದು, ಅನುದಾನ ಒದಗಿಸಿದ ತಕ್ಷಣ ಆದ್ಯತೆಯ ಮೇರೆಗೆ ಒದಗಿಸಲಾಗುವುದು.

ಬಸವ ವಸತಿ ಯೋಜನೆಯಡಿ ಮನೆಗಳು

1411(2358), ಶ್ರೀ ಅಪ್ಪಚ್ಚು ರಂಜನ್ ಎಂ.ಪಿ.(ಮಡಿಕೇರಿ)

ಅ) ಕಳೆದ 3 ವರ್ಷಗಳ ಅವಧಿಯಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಎಷ್ಟು ಮನೆಗಳು ಮಂಜೂರಾಗಿವೆ; (ಜಿಲ್ಲಾವಾರು ವಿವರ ನೀಡುವುದು)

ಆ) ಈ ಪೈಕಿ ಕೊಡಗು ಜಿಲ್ಲೆಯಲ್ಲಿ ಎಷ್ಟು ಮನೆಗಳು ಬ್ಲಾಕ್ ಆಗಿವೆ;

ಇ) ಸಿಬ್ಬಂದಿಗಳ ನಿರ್ಲಕ್ಷ್ಯದಿಂದ ಮನೆಗಳು ಬ್ಲಾಕ್ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಅಂತಹ ಸಿಬ್ಬಂದಿಗಳ ಮೇಲೆ ಸರ್ಕಾರ ಏನು ಕ್ರಮಕೈಗೊಂಡಿದೆ;

ಉ) ರಾಜ್ಯವನ್ನು ಗುಡಿಸಲು ಮುಕ್ತವನ್ನಾಗಿಸಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು;

ಊ) ಕಳೆದ ಮೂರು ವರ್ಷಗಳಿಂದ ಇದಕ್ಕಾಗಿ ಬಿಡುಗಡೆ ಮಾಡಿರುವ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)